ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 17 ನೇ ಮಾರ್ಚ್, 2020

ಸ್ವಿರ್ಜರ್‌ಲ್ಯಾಂಡ್‌ನ ಡವೋಸ್‌ನಲ್ಲಿ ನಡೆದ ವಿಶ್ವ ಆರ್ಥಿಕ ವೇದಿಕೆ (World Economics Forum)ದಲ್ಲಿ ಭಾಗವಹಿಸಿದ ನಂತರ ಘೋಷಣೆ ಮಾಡಿದ ಕೈಗಾರಿಕಾ ನೀತಿಗಳ ಕುರಿತು

ಶ್ರೀ ಕೆ. ಎ. ತಿಪ್ಪೇಸ್ವಾಮಿ(ನಾಮನಿರ್ದೇಶನ ಹೊಂದಿದವರು):-

154 (1280) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಾನ್ಯ ಮುಖ್ಯಮಂತ್ರಿಗಳು ಜನವರಿ-2020ರಲ್ಲಿ ಡವೋಸ್‌ನಲ್ಲಿ ನಡೆದ ವಿಶ್ವ ಆರ್ಥಿಕ ಜಾಗೃತಿಕ ವೇದಿಕೆ (World Economics Forum) ನಲ್ಲಿ ಭಾಗವಹಿಸಿ ಹಿಂತಿರುಗಿದ ನಂತರ ರಾಜ್ಯದಲ್ಲಿ ಹೊಸ ಕೈಗಾರಿಕಾ ನೀತಿಗಳನ್ನು ಘೋಷಿಸಿದ್ದಾರೆಯೇ ; ಹಾಗಿದ್ದಲ್ಲಿ, ಸಂಪೂರ್ಣ ಮಾಹಿತಿ ನೀಡುವುದು ;

(ಆ) ಈ ಘೋಷಣೆಗಳನ್ನು ಕಾರ್ಯಗತಗೊಳಿಸಲು ಇದುವರೆಗೆ ಸರ್ಕಾರದ ಆರ್ಥಿಕ ಇಲಾಖೆ, ಕಂದಾಯ ಇಲಾಖೆ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ಮುಂತಾದ ಇಲಾಖೆಗಳು ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ಘೋಷಣೆ ಅನ್ವಯ ಪ್ರಸ್ತುತವಾದ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯಲ್ಲಿರುವ ಕೈಗಾರಿಕಾ ನೀತಿಗಳನ್ನು ಮಾರ್ಪಡಿಸಲಾಗಿದೆಯೇ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ಮಾರ್ಪಡಿಸಿದ ಕೈಗಾರಿಕಾ ನೀತಿಯಿಂದ ಎಷ್ಟು ಉದ್ಯಮಗಳು ಸ್ಥಾಪಿತವಾಗಲಿವೆ ಮತ್ತು ಎಷ್ಟು ಜನರಿಗೆ ಉದ್ಯೋಗ ಅವಕಾಶ ದೊರೆಯಲಿದೆ;

(ಉ) ರಾಜ್ಯದಲ್ಲಿ ಬಂಡವಾಳ ಹೂಡುವ ಮತ್ತು ಕೈಗಾರಿಕೆ ಸ್ಥಾಪಿಸಲು ಉದ್ದೇಶಿಸಿರುವ ಉದ್ಯಮಗಳ ಮತ್ತು ಕಂಪನಿಗಳ ವಿವರ ನೀಡುವುದು ?